ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ರಾಜ್ಯದಲ್ಲಿ ಕೃಷಿ ಭೂಮಿ ಸವಳು ಭೂಮಿಯಾಗಿ ಪರಿವರ್ತನೆಯಾಗುತ್ತಿರುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

311 (244) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ನೀರಿನ ಅತೀ ಹೆಚ್ಚು ಬಳಕೆಯಿಂದ ಹಾಗೂ ರಾಸಾಯನಿಕ ಗೊಬ್ಬರದ ಅಸಮತೋಲನ ಉಪಯೋಗದಿಂದ ಭೂಮಿಯು ಸವಳು ಜಮೀನಾಗಿ ಪರಿವರ್ತನೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಕಳೆದ 5 ವರ್ಷಗಳ ಅವಧಿಯಲ್ಲಿ ಎಷ್ಟು ಹೆಕ್ಟೇರ್ ಜಮೀನು ಸವಳು ಭೂಮಿಯಾಗಿ ಪರಿವರ್ತನೆಗೊಂಡಿದೆ;

(ಇ) ಈ ಸವಳು ಭೂಮಿಯನ್ನು ಕೃಷಿ ಉಪಯೋಗಕ್ಕಾಗಿ ಪರಿವರ್ತನೆಗೊಳಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ಹಾಗೂ ಇದರ ರೂಪುರೇಷೆಗಳೇನು? (ವಿವರವಾದ ಮಾಹಿತಿ ಒದಗಿಸುವುದು)